ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**09.01.2026** **1.10 p.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ವಿಕಸಿತ ಭಾರತ ಯುವ ನಾಯಕರ ಸಂವಾದಕ್ಕೆ ಚಾಲನೆ
2. ಈ ವರ್ಷ ಭಾರತದ ಜಿಡಿಪಿ ಶೇಕಡ ೬.೬ರಷ್ಟು ಬೆಳವಣಿಗೆ ನಿರೀಕ್ಷೆ - ವಿಶ್ವಸಂಸ್ಥೆ ವರದಿಯಲ್ಲಿ ಉಲ್ಲೇಖ
3. ಭಾರತಕ್ಕೆ ಮುಂದಿನ ತಿಂಗಳು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಭೇಟಿ
4. ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್: ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್‌ಗೆ ಪಿ.ವಿ. ಸಿಂಧು ಲಗ್ಗೆ
5. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್: ಉದ್ಘಾಟನಾ ಪಂದ್ಯದಲ್ಲಿಂದು ಆರ್‌ಸಿಬಿ - ಮುಂಬೈ ಇಂಡಿಯನ್ಸ್ ಮುಖಾಮುಖಿ

<><><><>

ವಿಕಸಿತ ಭಾರತ ಯುವ ನಾಯಕರ ಸಂವಾದ ೨೦೨೬ರ ಎರಡನೇ ಆವೃತ್ತಿಯು ನವದೆಹಲಿಯಲ್ಲಿ ಇಂದಿನಿಂದ ಆರಂಭವಾಗಿದೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಸಮ್ಮುಖದಲ್ಲಿ ನಾಳೆ ಔಪಚಾರಿಕ ಉದ್ಘಾಟನಾ ಸಮಾರಂಭ ನಡೆಯಲಿದೆ. ಇದೇ ೧೨ ರಂದು ನಡೆಯುವ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ದೇಶ ಮತ್ತು ವಿದೇಶಗಳಿಂದ ೨ ಸಾವಿರದ ೫೦೦ಕ್ಕೂ ಹೆಚ್ಚು ಯುವಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಇಸ್ರೋ ಗಗನಯಾತ್ರಿಗಳಾದ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಮತ್ತು ಗ್ರೂಪ್ ಕ್ಯಾಪ್ಟನ್ ಪ್ರಶಾಂತ್ ನಾಯರ್ ಹಾಗೂ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಸಮ್ಮೇಳನದಲ್ಲಿ ಭಾಗವಹಿಸಿ, ಸಂವಾದ ನಡೆಸಲಿದ್ದಾರೆ.

<><><><>

ಭಾರತದ ಜಿಡಿಪಿ ಈ ವರ್ಷ ಶೇಕಡ ೬.೬ ಮತ್ತು ಮುಂದಿನ ವರ್ಷ ಶೇಕಡ ೬.೭ರಷ್ಟು ಬೆಳವಣಿಗೆ ಕಾಣುವ ನಿರೀಕ್ಷೆ ಇದೆ ಎಂದು ವಿಶ್ವಸಂಸ್ಥೆ ವರದಿ ತಿಳಿಸಿದೆ. ವಿಶ್ವ ಆರ್ಥಿಕ ಪರಿಸ್ಥಿತಿ ಮತ್ತು ನಿರೀಕ್ಷೆಗಳು - ೨೦೨೬ ವರದಿಯ ಪ್ರಕಾರ, ಜಿಡಿಪಿ ಬೆಳವಣಿಗೆಗೆ ಬಲವಾದ ಸಾರ್ವಜನಿಕ ಹೂಡಿಕೆ

ಬೆಂಬಲ ನೀಡುತ್ತದೆ. ಇತ್ತೀಚಿನ ತೆರಿಗೆ ಸುಧಾರಣೆಗಳು ಮತ್ತು ವಿತ್ತೀಯ ಸಡಿಲಿಕೆಯು ಹೆಚ್ಚುವರಿ ಅಲ್ಪಾವಧಿ ಬೆಂಬಲವನ್ನು ನೀಡುತ್ತದೆ. ವಿಶ್ವಸಂಸ್ಥೆಯ ವರದಿಯ ಪ್ರಕಾರ, ಭಾರತ, ಇಂಡೋನೇಷ್ಯಾ ಸೇರಿದಂತೆ ಅನೇಕ ದೊಡ್ಡ ಅಭಿವೃದ್ಧಿಶೀಲ ಆರ್ಥಿಕತೆಗಳು, ದೇಶೀಯ ಬೇಡಿಕೆ ಅಥವಾ ಉದ್ದೇಶಿತ ನೀತಿ ಕ್ರಮಗಳಿಂದಾಗಿ ಗಮನಾರ್ಹ ಬೆಳವಣಿಗೆಯನ್ನು ಮುಂದುವರಿಸುವ ನಿರೀಕ್ಷೆ ಇದೆ.

<><><>

ಗುಜರಾತ್‌ನ ಪವಿತ್ರ ಸೋಮನಾಥ ದೇವಾಲಯಕ್ಕೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ದೇಶದ ಸಾಮೂಹಿಕ ಪ್ರಜ್ಞೆಯನ್ನು ಜಾಗೃತಗೊಳಿಸುವಲ್ಲಿ ಸೋಮನಾಥ ಧಾಮ ಪ್ರಮುಖ ಪಾತ್ರವಹಿಸುತ್ತದೆ. ಸೋಮನಾಥ ಧಾಮವು ಶತಮಾನಗಳಿಂದ ತನ್ನ ದೈವಿಕ ಶಕ್ತಿಯಿಂದ ಎಲ್ಲಾ ಪೀಳಿಗೆಗೆ ಸ್ಫೂರ್ತಿ ನೀಡಿದೆ. ಸೋಮನಾಥದಿಂದ ಹೊರಹೊಮ್ಮುವ ಶಕ್ತಿಯು ನಂಬಿಕೆ, ಧೈರ್ಯ ಮತ್ತು ಸ್ವಾಭಿಮಾನದ ಹಾದಿಯನ್ನು ಬೆಳಗುತ್ತಲೇ ಇದೆ. ಪ್ರತಿ ಯುಗದಲ್ಲೂ ಭಾರತದ ಜನರಿಗೆ ಮಾರ್ಗದರ್ಶಕ ಬೆಳಕಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

<><><>

ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಮುಂದಿನ ತಿಂಗಳು ಭಾರತಕ್ಕೆ ಭೇಟಿ ನೀಡಲಿದ್ದಾರೆ. ನವದೆಹಲಿಯಲ್ಲಿ ಫೆಬ್ರವರಿ ೧೯ ಮತ್ತು ೨೦ರಂದು ಭಾರತ-ಎಐ-ಇಂಪ್ಯಾಕ್ಟ್ ಶೃಂಗಸಭೆ-೨೦೨೬ ನಡೆಯಲಿದೆ. ಭಾರತದ ಆಹ್ವಾನದ ಮೇರೆಗೆ ಈ ಶೃಂಗಸಭೆಯಲ್ಲಿ ಪಾಲ್ಗೊಳ್ಳುವುದಾಗಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ತಿಳಿಸಿದ್ದಾರೆ. ಭಾರತದಲ್ಲಿ ಆಯೋಜಿಸಲಾಗುತ್ತಿರುವ ಈ ಶೃಂಗಸಭೆಯು ಜಾಗತಿಕ ದಕ್ಷಿಣದಲ್ಲಿ ಆಯೋಜಿಸುತ್ತಿರುವ ಮೊದಲ ಜಾಗತಿಕ ಎಐ ಶೃಂಗಸಭೆಯಾಗಿದೆ. ಇತ್ತೀಚೆಗೆ ಫ್ರಾನ್ಸ್ ವಿದೇಶಾಂಗ ಸಚಿವ ಜೀನ್ ನೋಯೆಲ್ ಬ್ಯಾರೆಟ್ ಅವರೊಂದಿಗಿನ ಸಭೆಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಈ ಶೃಂಗಸಭೆಯಲ್ಲಿ ಪಾಲ್ಗೊಳ್ಳುವಂತೆ ಫ್ರಾನ್ಸ್ ಅಧ್ಯಕ್ಷರಿಗೆ ಆಹ್ವಾನಿಸಿದರು. ಭಾರತ ಮತ್ತು ಫ್ರಾನ್ಸ್ ಒಟ್ಟಾಗಿ ಕೆಲಸ ಮಾಡುವುದು ದ್ವಿಪಕ್ಷೀಯ ಸಂಬಂಧಕ್ಕೆ ಮಾತ್ರವಲ್ಲದೆ, ಜಾಗತಿಕ ರಾಜಕೀಯವನ್ನು ಸ್ಥಿರಗೊಳಿಸಲೂ ಸಹ ಮುಖ್ಯವಾಗಿದೆ.

<><><>

ನವದೆಹಲಿಯಲ್ಲಿಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ರೈಲ್ವೆಯ ನೂರು ಅಧಿಕಾರಿಗಳಿಗೆ ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ - ೨೦೨೫ ಮತ್ತು ಉತ್ತಮವಾಗಿ ಕಾರ್ಯ ನಿರ್ವಹಿಸಿರುವ ೨೬ ರೈಲ್ವೆ ವಲಯಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಭಾರತೀಯ ರೈಲ್ವೆಗೆ ಅನುಕರಣೀಯ ಸೇವೆ ಮತ್ತು ಅತ್ಯುತ್ತಮ ಕೊಡುಗೆಗಳನ್ನು ಗುರುತಿಸಿ ಈ ಪ್ರತಿಷ್ಠಿತ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಮಹಾಕುಂಭ ಮೇಳದಂತಹ ದೊಡ್ಡ ಕಾರ್ಯಕ್ರಮಗಳಲ್ಲಿ ಸುರಕ್ಷಿತ ಮತ್ತು ಸುಗಮ ರೈಲ್ವೆ ಕಾರ್ಯಾಚರಣೆ ಖಾತ್ರಿಪಡಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದ ಸಿಬ್ಬಂದಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

<><><><>

ಪ್ರಧಾನಮಂತ್ರಿಗಳ ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಮುಖ ವೇದಿಕೆಯಾದ ಪ್ರಗತಿ ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲನ್ನು ಗುರುತಿಸಿದೆ. ಇಂದು ಈ ವಿಶೇಷ ಸರಣಿಯಲ್ಲಿ ಪ್ರಗತಿ ಕಾರ್ಯ ವಿಧಾನದ ಅಡಿಯಲ್ಲಿ ಪರಿಶೀಲಿಸಲಾದ ವಿದ್ಯುತ್ ಕ್ಷೇತ್ರದ ಯೋಜನೆಗಳ ಕುರಿತು ಮಾಹಿತಿ ಆಲಿಸೋಣ. ವಿದ್ಯುತ್ ವಲಯದಲ್ಲಿ ಆಡಳಿತಾತ್ಮಕ, ತಾಂತ್ರಿಕ ನಿಯಂತ್ರಕ ಮತ್ತು ನೈಸರ್ಗಿಕ ಅಂಶಗಳ ಸಂಯೋಜನೆಯಿಂದ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗುತ್ತದೆ. ಮುಖ್ಯವಾಗಿ ಭೂಸ್ವಾಧೀನ ಸಮಸ್ಯೆ ಏರ್ಪಡುತ್ತದೆ. ಪ್ರಗತಿ ಪರಿಸರ ವ್ಯವಸ್ಥೆ ಅಡಿಯಲ್ಲಿ ೧೦.೫೩ ಲಕ್ಷ ಕೋಟಿ ರೂಪಾಯಿಗಳ ೨೩೭ ವಿದ್ಯುತ್ ಯೋಜನೆಗಳನ್ನು ವಿವಿಧ ಹಂತಗಳಲ್ಲಿ ಪರಿಶೀಲಿಸಲಾಗಿದ್ದು, ಇವುಗಳನ್ನು ಕಾರ್ಯಾರಂಭ ಮಾಡಲಾಗಿದೆ. ಪ್ರಧಾನಮಂತ್ರಿ ಅಧ್ಯಕ್ಷತೆಯಲ್ಲಿ ೪.೧೨ ಲಕ್ಷ ಕೋಟಿ ರೂಪಾಯಿ ಮೌಲ್ಯದ ಒಟ್ಟು ೫೩ ವಿದ್ಯುತ್ ಯೋಜನೆಗಳನ್ನು ಪರಿಶೀಲಿಸಲಾಗಿದೆ. ಈ ಪೈಕಿ ೨೭ ಪ್ರಸರಣ, ೧೪ ಉಷ್ಣ, ೯ ಜಲವಿದ್ಯುತ್ ಮತ್ತು ೩ ಕಲ್ಲಿದ್ದಲು ಗಣಿ ಯೋಜನೆಗಳು ಸೇರಿವೆ. ಪ್ರಗತಿ ಸಭೆಯ ಹಸ್ತಕ್ಷೇಪದ ನಂತರ ಸ್ಥಗಿತಗೊಂಡ ಅನೇಕ ವಿದ್ಯುತ್ ಉತ್ಪಾದನೆ ಮತ್ತು ಪ್ರಸರಣ ಯೋಜನೆಗಳು ಕಾರ್ಯಾರಂಭ ಮಾಡಿವೆ. ಇದು ವರ್ಧಿತ ವಿದ್ಯುತ್ ಲಭ್ಯತೆ, ಸುಧಾರಿತ ಗ್ರಿಡ್ ವಿಶ್ವಾಸಾರ್ಹತೆ ಮತ್ತು ರಾಷ್ಟ್ರೀಯ ಹೂಡಿಕೆಯ ಉತ್ತಮ ಬಳಕೆಗೆ ಕಾರಣವಾಗಿದೆ.

<><><><>

ದೇಶದಲ್ಲಿ ಮಾದಕದ್ರವ್ಯಗಳ ಸಮಸ್ಯೆಯನ್ನು ಎದುರಿಸಲು ಸಾಮೂಹಿಕ ರಾಷ್ಟ್ರೀಯ ಪ್ರಯತ್ನವನ್ನು ಪರಿಶೀಲಿಸಲು ಮತ್ತು ನಿರ್ಣಯಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಸಂಜೆ

೯ನೇ ಉನ್ನತ ಮಟ್ಟದ ನಾರ್ಕೊ ಸಮನ್ವಯ ಕೇಂದ್ರದ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯಲ್ಲಿ ಸಚಿವಾಲಯಗಳು ಮತ್ತು ಇಲಾಖೆಗಳ ಅಧಿಕಾರಿಗಳು, ರಾಜ್ಯ ಸರ್ಕಾರಗಳ ಪ್ರತಿನಿಧಿಗಳು ಮತ್ತು ಮಾದಕದ್ರವ್ಯ ಕಾನೂನುಜಾರಿ ಸಂಸ್ಥೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಮಾದಕದ್ರವ್ಯ ಜಾಲವನ್ನು ಸಂಪೂರ್ಣವಾಗಿ ಬೇಧಿಸುವುದು ಮತ್ತು ಎಲ್ಲಾ ಕೋನಗಳಿಂದಲೂ ತನಿಖೆಯನ್ನು ಚುರುಕುಗೊಳಿಸುವುದು ಸೇರಿದಂತೆ ಹಲವು ವಿಷಯಗಳ ಸಭೆ ಗಮನಹರಿಸಲಿದೆ.

<><><>

ವಿದೇಶಗಳಲ್ಲಿ ವಾಸಿಸುತ್ತಿರುವ ಭಾರತೀಯರಿಗೆ ಪ್ರಧಾನಿ ನರೇಂದ್ರ ಮೋದಿ ಅವರು, ಪ್ರವಾಸಿ ಭಾರತೀಯ ದಿನದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ಭಾರತೀಯ ವಲಸಿಗರು, ಭಾರತ ಮತ್ತು ಪ್ರಪಂಚದ ನಡುವಿನ ಬಲವಾದ ಕೊಂಡಿಯಾಗಿದ್ದಾರೆ. ವಿದೇಶಗಳಲ್ಲಿ ವಾಸಿಸುವ ಭಾರತೀಯರು ಅಲ್ಲಿನ ಸಮಾಜಗಳನ್ನು ಶ್ರೀಮಂತಗೊಳಿಸಿದ್ದಾರೆ ಮತ್ತು ತಮ್ಮ ತಾಯ್ನಾಡಿನೊಂದಿಗೆ ಸಂಪರ್ಕದಲ್ಲಿದ್ದಾರೆ. ಅಲ್ಲದೆ, ಭಾರತೀಯ ಸಂಸ್ಕೃತಿಯನ್ನು ಜನಪ್ರಿಯಗೊಳಿಸಿದ್ದಾರೆ ಎಂದು ಹೇಳಿದ್ದಾರೆ.

<><><>

ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತ ಬ್ಯಾಡ್ಮಿಂಟನ್ ಪಟು ಪಿ.ವಿ. ಸಿಂಧು ಕೌಲಲಾಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್‌ಗೆ ಲಗ್ಗೆ ಇಟ್ಟಿದ್ದಾರೆ. ಕ್ವಾರ್ಟರ್ ಫೈನಲ್‌ನಲ್ಲಿ ೧೨ ನಿಮಿಷಗಳ ಆಟದ ನಂತರ ಜಪಾನ್‌ನ ಅಕಾನೆ ಯಮಗುಚಿ ನಿವೃತ್ತರಾದ ಹಿನ್ನೆಲೆಯಲ್ಲಿ ೨೧-೧೧ ಅಂತರದಿಂದ ಪಿ.ವಿ. ಸಿಂಧು ಗೆದ್ದು, ಸೆಮಿಫೈನಲ್‌ಗೆ ಮುನ್ನಡೆದರು. ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಅಗ್ರ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಕ್ವಾರ್ಟರ್ ಫೈನಲ್‌ನಲ್ಲಿ ಇಂಡೋನೇಷ್ಯಾದ ಎಂ.ಎಸ್. ಫಿಕ್ರಿ ಮತ್ತು ಎಫ್. ಅಲ್ಫಿಯನ್ ಜೋಡಿಯನ್ನು ಎದುರಿಸಲಿದ್ದಾರೆ. ಭಾರತದ ಈ ಜೋಡಿ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಮಲೇಷ್ಯಾದ ಜುನೈದ್ ಆರಿಫ್ ಮತ್ತು ರಾಯ್‌ಕಿಂಗ್ ಯಾಪ್ ಜೋಡಿಯನ್ನು ೨೧-೧೮, ೨೧-೧೧ ಅಂತರದಿಂದ ಸೋಲಿಸಿದರು. ಪುರುಷರ ಸಿಂಗಲ್ಸ್ ವಿಭಾಗದ ಪ್ರಿ-ಕ್ವಾರ್ಟರ್ ಫೈನಲ್

ಪಂದ್ಯಗಳಲ್ಲಿ ಸೋತ ನಂತರ ಲಕ್ಷ್ಯಸೇನ್ ಮತ್ತು ಆಯುಷ್ ಶೆಟ್ಟಿ ಪಂದ್ಯಾವಳಿಯಿಂದ ಹೊರಬಿದ್ದಿದ್ದಾರೆ.

<><><><>

ಬಹು ನಿರೀಕ್ಷಿತ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯುಪಿಎಲ್ ೨೦೨೬ರ ನಾಲ್ಕನೇ ಆವೃತ್ತಿ ಇಂದಿನಿಂದ ಪ್ರಾರಂಭವಾಗಲಿದೆ. ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ನಡೆಯುವ ಉದ್ಘಾಟನಾ ಟಿ-೨೦ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ತಂಡ, ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಇದಕ್ಕೂ ಮುನ್ನ ನಡೆಯಲಿರುವ ಅದ್ಧೂರಿ ಉದ್ಘಾಟನಾ ಸಮಾರಂಭದಲ್ಲಿ ಯೋ ಯೋ ಹನಿ ಸಿಂಗ್, ಜಾಕ್ವೆಲಿನ್ ಫರ್ನಾಂಡಿಸ್, ಹರ್ನಾಸ್ ಸಂಧು ಸೇರಿದಂತೆ ಅನೇಕ ತಾರೆಯರು ಪ್ರದರ್ಶನ ನೀಡಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>